## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 509 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 12-12-2024 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ವಿಜಯಪುರ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಕೆಲವು ವ್ಯಕ್ತಿಗಳು ಅನಧಿಕೃತ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿರುತ್ತದೆ.<br><br>ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ಮತ್ತು ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br><br>ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ಮೊಕದ್ದಮೆ ದಾಖಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಕೆಲವೊಂದು ಅಬಕಾರಿ ಇಲಾಖೆಯ ಅಧಿಕಾರಿಗಳು | ವಿಜಯಪುರ ಜಿಲ್ಲೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟವಾಗಲು ಯಾವದೇ ಅಬಕಾರಿ ಇಲಾಖೆಯ ಅಧಿಕಾರಿಗಳು ಶಾಮಿಲಾಗಿರುವುದು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲವಾದ್ದರಿಂದ ಅಧಿಕಾರಿಗಳ ವಿರುದ್ಧ ಯಾವುದೇ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| | ಶಾಮಿಲಾಗಿ ಕಾನೂನು ಬಾಹಿರವಾಗಿ ಮದ್ಯ ಮಾರಾಟಕ್ಕೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ ತಡೆಗಟ್ಟಲು ಹಾಗೂ ಇಲಾಖಾಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕಠಿಣ ಕ್ರಮಗಳೇನು; (ವಿವರ ನೀಡುವುದು) | ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟದ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ಕಳೆದ ಮೂರು ವರ್ಷಗಳಲ್ಲಿ ಒಟ್ಟು 5751 ದಾಳಿ ನಡೆಸಿ, 4437 ಪ್ರಕರಣಗಳನ್ನು ದಾಖಲಿಸಿ, 5021 ಆರೋಪಿತರನ್ನು ದಸ್ತಗಿರಿಗೊಳಪಡಿಸಲಾಗಿರುತ್ತದೆ. ವರ್ಷವಾರು ವಿವರ ಈ ಕೆಳಕಂಡಂತಿದೆ. |
| ಇ) | ಕಾನೂನು ಬಾಹಿರವಾಗಿ ಮದ್ಯ ಮಾರಾಟ ದಾಖಲಾಗಿರುವ ಪ್ರಕರಣಗಳ ಎಷ್ಟು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | |

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ) | ನಡೆಸಿದ ದಾಳಿಗಳ ಸಂಖ್ಯೆ | ದಾಖಲಿಸಿದ ಪ್ರಕರಣಗಳು | | | ದಸ್ತಗಿರಿಗೊಳಪಡಿಸಿದ ಆರೋಪಿಗಳ ಸಂಖ್ಯೆ |
|---|---|---|---|---|---|
| | | ಕ.ಅ. ಕಾಯ್ದೆ 1965 ಕಲಂ 32, 34 | ಕ.ಅ. ಕಾಯ್ದೆ 1965 ರ ಕಲಂ 15(ಎ) | ಒಟ್ಟು | |
| 2021-22 | 1556 | 147 | 814 | 961 | 1048 |
| 2022-23 | 2186 | 256 | 1736 | 1992 | 2431 |
| 2023-24 | 2009 | 203 | 1281 | 1484 | 1542 |
| **ಒಟ್ಟು** | **5751** | **606** | **3831** | **4437** | **5021** |

**ಆಇ 94ಇಎಲ್ ಕ್ಯೂ 2024**

**(ಆರ್.ಬಿ ತಿಮ್ಮಾಪುರ)**
**ಅಬಕಾರಿ ಸಚಿವರು**